**ದಿನಾಂಕ: 18.12.2021 ರಂದು 11-30 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ತೋಟಗಾರಿಕೆ ಅಧಿಕಾರಿ (Horti. Inspector) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಟ್ರಾಫಿಕ್ ಇಲಾಖೆಯ ಅಧಿಕಾರಿಗಳು |
| ಸದಸ್ಯರುಗಳು | ಮೇಜರ್ ರೋಡ್ ಇಲಾಖೆ ಅಧಿಕಾರಿಗಳು |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

  **ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

  - 21ನೇ ಮುಖ್ಯರಸ್ತೆ, 5ನೇ ಎ ಅಡ್ಡರಸ್ತೆಯಲ್ಲಿ ನಾಮಫಲಕವನ್ನು ಅಳವಡಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.
  - 4ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, 4ನೇ ಹಂತ ಡಾಲರ್ಸ್ ಕಾಲೋನಿಯಲ್ಲಿ ಮರದ ರೆಂಬೆ-ಕೊಂಬೆಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.
  - ಡಾಲರ್ಸ್ ಕಾಲೋನಿಯ ಹಲವು ಕಡೆಗಳಲ್ಲಿ ಬೀದಿ ದೀಪಗಳನ್ನು ಸರಿಪಡಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಕೋರಲಾಯಿತು.
  - ಬಿಡಬ್ಲ್ಯೂಎಸ್ಎಸ್ಬಿ ರವರು ಮ್ಯಾನ್‌ಹೋಲ್‌ನಿಂದ ಹೊರಹಾಕಿರುವ ಸಿಲ್ಟ್‌ಅನ್ನು ತೆರವುಗೊಳಿಸುವಂತೆ ಬಿಡಬ್ಲ್ಯೂಎಸ್ಎಸ್ಬಿ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.

ಪು.ತಿ.ನೋ

Scanned with CamScanner

- 21ನೇ ಮುಖ್ಯರಸ್ತೆಯಲ್ಲಿ ಗಾರ್‌ಬೇಜ್ ಸಂಗ್ರಹಣೆಯಾಗಿದ್ದು, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಗಾರ್‌ಬೇಜ್‌ಅನ್ನು ತೆರವುಗೊಳಿಸುವಂತೆ ಕೋರಿ ಚರ್ಚಿಸಲಾಯಿತು.
- 16ನೇ ಮುಖ್ಯರಸ್ತೆ, ರಾಗಿಗುಡ್ಡ ಸ್ಲಂನಲ್ಲಿ ಎಲೆಕ್ಟ್ರಿಕ್ ಕಂಬವು ಬೆಂಡಾಗಿದ್ದು, ಅದನ್ನು ಸಿಮೆಂಟ್ ಹಾಕಿ ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.
- ಜೆ.ಪಿ.ನಗರ 2ನೇ ಹಂತದ ಜೆ.ಪಿ.ನಗರ ಕ್ಲಬ್‌ನ ಹಾಗೂ ಆಟದ ಮೈದಾನದಲ್ಲಿ ಗಾರ್‌ಬೇಜ್‌ಅನ್ನು ಸ್ವಚ್ಛಗೊಳಿಸಿ, ಬೇಲಿಯನ್ನು ಹಾಕುವಂತೆ ಕೋರಲಾಯಿತು.
- ಜೆ.ಪಿ.ನಗರ 4ನೇ ಹಂತ ಡಾಲರ್ಸ್ ಕಾಲೋನಿಯ ಬೃಹತ್ ನೀರುಗಾಲುವೆ ಹತ್ತಿರದಲ್ಲಿ ತಾತ್ಕಾಲಿಕ ಶೆಡ್‌ಗಳನ್ನು ಹಾಕಲಾಗಿದ್ದು, ಅದನ್ನು ತೆರವುಗೊಳಿಸುವಂತೆ ಕೋರಲಾಯಿತು.

- ಮೇಲ್ಕಂಡ ಎಲ್ಲಾ ದೂರುಗಳ ಬಗ್ಗೆ ಚರ್ಚಿಸಲಾಗಿ, ಆಯಾ ದೂರುಗಳ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಸೂಚಿಸಲಾಗಿ, ಮುಂದಿನ ವಾರ್ಡ್ ಸಮಿತಿ ಸಭೆಯಲ್ಲಿ ದೂರುಗಳ ಬಗ್ಗೆ ಕ್ರಮ ಕೈಗೊಂಡ ಅನುಪಾಲನಾ ವರದಿಯನ್ನು ನೀಡಲು ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **ಸದಸ್ಯ ಕಾರ್ಯದರ್ಶಿ** | **ಅಧ್ಯಕ್ಷರು** |
| **ಹಾಗೂ ಸಹಾಯಕ ಅಭಿಯಂತರರು** | **ವಾರ್ಡ್ ಸಮಿತಿ, ವಾರ್ಡ್ ನಂ. 177** |
| **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

Scanned with CamScanner